# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2395 |
| ಸದಸ್ಯರ ಹೆಸರು | : | ಡಾ॥ ಚಂದ್ರಶೇಖರ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22-03-2022 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕಲ್ಯಾಣ ಕರ್ನಾಟಕ ಭಾಗದಲ್ಲಿ ದುರಸ್ಥಿಯಾಗದೆ ಆ ಅಂಗನವಾಡಿ ಕೇಂದ್ರಗಳು ಅಪಾಯದ ಅಂಚಿನಲ್ಲಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು (ಜಿಲ್ಲಾವಾರು ಮಾಹಿತಿ ನೀಡುವುದು) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಇರುವ 6 ಜಿಲ್ಲೆಗಳ ಪೈಕಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳು ದುರಸ್ಥಿಯಾಗದೆ ಅಪಾಯದ ಅಂಚಿನಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮ ಹಾಗೂ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ. |
| ಆ. | ಅಂಗನವಾಡಿ ಮಕ್ಕಳಿಗೆ ಸರಿಯಾಗಿ ಪೌಷ್ಠಿಕಾಂಶ ಆಹಾರ ಸಿಗದಿರುವುದರಿಂದ ಮಕ್ಕಳಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಅಂಗನವಾಡಿ ಮಕ್ಕಳಿಗೆ ಸರಿಯಾಗಿ ಪೌಷ್ಠಿಕಾಂಶ ಆಹಾರ ಸಿಗದೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಅಂಗನವಾಡಿ ಕೇಂದ್ರಗಳಲ್ಲಿನ ಫಲಾನುಭವಿಗಳಿಗೆ ಈ ಕೆಳಕಂಡಂತೆ ಪೌಷ್ಠಿಕಾಂಶ ಆಹಾರ ಒದಗಿಸಲಾಗಿರುತ್ತದೆ.<br>• ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿ ದಿನ ರೂ.8.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.<br>• ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ. |

| | | |
|---|---|---|
| | | • 6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಟಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನುನೀಡಲಾಗುತ್ತಿದೆ.<br>• 3 ವರ್ಷದಿಂದ 6 ವರ್ಷದ ತೀವ್ರ ಅಪೌಷ್ಟಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಟಿಕ ಮಕ್ಕಳಿಗೆ ಆರೋಗ್ಯ ಇಲಾಖೆಯ ಪೌಷ್ಟಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.<br>• ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಟಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತದೆ. |

**ಸಂ:** ಮಮಇ 155 ಐಸಿಡಿ 2022

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಚಂದ್ರಶೇಖರ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2395 ಕ್ಕೆ ಒದಗಿಸಲಾದ ಅನುಬಂಧ**

| ಕ್ರ.ಸಂ. | ಜಿಲ್ಲೆ | ಮಾಹಿತಿ |
|---|---|---|
| 1 | ಬಳ್ಳಾರಿ | ಬಳ್ಳಾರಿ ಜಿಲ್ಲೆಯಲ್ಲಿ ಯಾವುದೇ ಅಂಗನವಾಡಿ ಕೇಂದ್ರವು ಅಪಾಯದ ಅಂಚಿನಲ್ಲಿ ಇರುವುದಿಲ್ಲ |
| 2 | ಕಲಬುರಗಿ | ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 68 ಅಂಗನವಾಡಿ ಕಟ್ಟಡಗಳು ಅಪಾಯದ ಅಂಚಿನಲ್ಲಿ ಇವೆ ಸದರಿ ಶಿಥಿಲಗೊಂಡ ಅಂಗನವಾಡಿ ಕೇಂದ್ರಗಳನ್ನು ಬಾಡಿಗೆ ಕಟ್ಟಡಗಳಲ್ಲಿ ನಡೆಸಲಾಗುತ್ತಿದೆ. |
| 3 | ಬೀದರ | ಬೀದರ ಜಿಲ್ಲೆಯಲ್ಲಿ ಯಾವುದೇ ಅಂಗನವಾಡಿ ಕೇಂದ್ರವು ಅಪಾಯದ ಅಂಚಿನಲ್ಲಿ ಇರುವುದಿಲ್ಲ |
| 4 | ರಾಯಚೂರು | ರಾಯಚೂರು ಜಿಲ್ಲೆಯಲ್ಲಿ ಯಾವುದೇ ಅಂಗನವಾಡಿ ಕೇಂದ್ರವು ಅಪಾಯದ ಅಂಚಿನಲ್ಲಿ ಇರುವುದಿಲ್ಲ. ದುರಸ್ಥಿಗೆ ಬಂದಿರುವ 44 ಅಂಗನವಾಡಿ ಕಟ್ಟಡಗಳನ್ನು ದುರಸ್ಥಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ. |
| 5 | ಯಾದಗಿರಿ | ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 109 ಅಂಗನವಾಡಿ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿ ಇದ್ದು, ಸದರಿ ಶಿಥಿಲಗೊಂಡ ಕಟ್ಟಡ ಹೊಂದಿರುವ ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. |
| 6 | ಕೊಪ್ಪಳ | ಕೊಪ್ಪಳ ಜಿಲ್ಲೆಯಲ್ಲಿ ಯಾವುದೇ ಅಂಗನವಾಡಿ ಕೇಂದ್ರವು ಅಪಾಯದ ಅಂಚಿನಲ್ಲಿ ಇರುವುದಿಲ್ಲ ಶಿಥಿಲಗೊಂಡ ಅಂಗನವಾಡಿ ಕಟ್ಟಡಗಳನ್ನು ಬೇರೆಡೆಗೆ ಸ್ಥಳಾಂತರಿಸಲಾಗಿದೆ. |

ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು